ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತೆರಡನೆಯ ಅಧಿವೇಶನ
ಸೋಮವಾರ, ದಿನಾಂಕ : 07 ನೇ ಡಿಸೆಂಬರ್, 2020

ಸರ್ಕಾರಿ ಶಾಲೆಗಳಲ್ಲಿ ಶಿಕ್ಷಕರ ಕೊರತೆಯ ಕುರಿತು

ಶ್ರೀ ರಘುನಾಥ್‌ರಾವ್ ಮಲ್ಕಾಪೂರೆ(ವಿಧಾನಸಭೆಯಿಂದ ಚುನಾಯಿತರಾದವರು) –

63 (96) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಮತ್ತು ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಬೀದರ್ ಜಿಲ್ಲೆಯಲ್ಲಿ ಎಷ್ಟು ಸರ್ಕಾರಿ ಶಾಲೆಗಳಲ್ಲಿ ಶಿಕ್ಷಕರ ಕೊರತೆ ಇದೆ; (ತಾಲ್ಲೂಕುವಾರು ಮತ್ತು ವಿಷಯಗಳವಾರು ವಿವರ ನೀಡುವುದು)

(ಆ) ಪಠ್ಯಕ್ರಮದಲ್ಲಿ ಆಯಾ ವಿಷಯಗಳಲ್ಲಿ ಪರಿಣಿತರಾದ ಶಿಕ್ಷಕರನ್ನು ನೇಮಿಸಲಾಗಿದೆಯೇ; (ಮಾಹಿತಿ ನೀಡುವುದು)

(ಇ) ಜಿಲ್ಲೆಯಲ್ಲಿ ಪ್ರಸಕ್ತ ಮುಖ್ಯೋಪಾಧ್ಯಾಯರು ಅಗತ್ಯಕ್ಕಿಂತ ಅತೀ ಕಡಿಮೆ ಶಿಕ್ಷಕರನ್ನು ಹೊಂದಿರುವ ಶಾಲೆಗಳ ಸಂಖ್ಯೆ ಎಷ್ಟು; ಹಾಗೂ ಈ ಸಮಸ್ಯೆಯನ್ನು ಸರಿಪಡಿಸಲು ಸರ್ಕಾರ ಕೈಗೊಂಡ ಕ್ರಮಗಳೇನು?